ಕರ್ನಾಟಕ ಸರ್ಕಾರ
ತಾಂತ್ರಿಕ ಶಿಕ್ಷಣ ಇಲಾಖೆ

ಸಂಖ್ಯೆ: ಡಿಟಿಇ/13/ಇಎಸ್‌ಟಿ(10)/2019-20

ನಿರ್ದೇಶಕರವರ ಕಛೇರಿ,
ತಾಂತ್ರಿಕ ಶಿಕ್ಷಣ ನಿರ್ದೇಶನಾಲಯ,
ಬೆಂಗಳೂರು-560 001.
ದಿನಾಂಕ: 20-11-2019

: ಹಿಂಬರಹ :

ಸರ್ಕಾರದ ಅಧಿಸೂಚನೆ ಸಂಖ್ಯೆ: ಇಡಿ 108 ಡಿಟಿಇ 2019 ದಿನಾಂಕ: 13-11-2019 ರಲ್ಲಿ ತಾಂತ್ರಿಕ ಶಿಕ್ಷಣ ಇಲಾಖೆಯ ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳ ಪ್ರಾಚಾರ್ಯರ ವೃಂದದ ದಿನಾಂಕ: 31-03-2019 ರಲ್ಲಿದ್ದಂತೆ ಪರಿಷ್ಕೃತ ತಾತ್ಕಾಲಿಕ ಜ್ಯೇಷ್ಠತಾ ಪಟ್ಟಿಗೆ ಆಕ್ಷೇಪಣೆ / ಸಲಹೆಗಳಿಗಾಗಿ ಪ್ರಕಟಿಸಲಾಗಿದೆ. ಸದರಿ ಸರ್ಕಾರದ ಅಧಿಸೂಚನೆಯನ್ನು ಸಂಬಂಧಪಟ್ಟವರಿಗೆ ಮಾಹಿತಿಗಾಗಿ ಹಾಗೂ ಮುಂದಿನ ಕ್ರಮಕ್ಕಾಗಿ ಸಲ್ಲಿಸಿದೆ.

ನಿರ್ದೇಶಕರು,
ತಾಂತ್ರಿಕ ಶಿಕ್ಷಣ ಇಲಾಖೆ,
ಬೆಂಗಳೂರು.

ಪ್ರತಿ-

1. ತಾಂತ್ರಿಕ ಶಿಕ್ಷಣ ಇಲಾಖೆಯ ಸಂಬಂಧಪಟ್ಟ ಎಲ್ಲಾ ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳ ಪ್ರಾಚಾರ್ಯರುಗಳಿಗೆ / ಅಧಿಕಾರಿಗಳಿಗೆ;
2. ಸರ್ಕಾರದ ಅಧೀನ ಕಾರ್ಯದರ್ಶಿ, ಉನ್ನತ ಶಿಕ್ಷಣ ಇಲಾಖೆ(ತಾಂತ್ರಿಕ ಶಿಕ್ಷಣ); ಬಹುಮಹಡಿ ಕಟ್ಟಡ, ಬೆಂಗಳೂರು;
3. ತಾಂತ್ರಿಕ ಶಿಕ್ಷಣ ಇಲಾಖೆಯ ಸಂಬಂಧಪಟ್ಟ ಸಹಾಯಕ ಆಡಳಿತಾಧಿಕಾರಿಗಳಿಗೆ;
4. ನೋಡಲ್ ಅಧಿಕಾರಿ, ಇ-ಆಡಳಿತ ವಿಭಾಗ, ತಾಂತ್ರಿಕ ಶಿಕ್ಷಣ ನಿರ್ದೇಶನಾಲಯ, ಬೆಂಗಳೂರು (ವೆಬ್‌ಸೈಟ್‌ನಲ್ಲಿ ಅಳವಡಿಸಲು);
5. ಕಛೇರಿ ಪ್ರತಿ.

**ಕರ್ನಾಟಕ ಸರ್ಕಾರ**

ಸಂಖ್ಯೆ: ಇಡಿ 108 ಡಿಟಿಇ 2019.

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿ ಕಟ್ಟಡ, 2ನೇ ಗೇಟ್, 6ನೇ ಮಹಡಿ,
ಬೆಂಗಳೂರು, ದಿನಾಂಕ: 13-11-2019.

## ಅಧಿಸೂಚನೆ

ವಿಷಯ: ತಾಂತ್ರಿಕ ಶಿಕ್ಷಣ ಇಲಾಖೆಯ ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಪ್ರಾಂಶುಪಾಲರು ವೃಂದದ ಪರಿಷ್ಕೃತ ತಾತ್ಕಾಲಿಕ ಜೇಷ್ಠತಾ ಪಟ್ಟಿಯನ್ನು (ದಿನಾಂಕ:31-03-2019 ರಲ್ಲಿದ್ದಂತೆ) ಪ್ರಕಟಿಸುವ ಬಗ್ಗೆ.

ಉಲ್ಲೇಖ: (1) ಸರ್ಕಾರದ ಆದೇಶ ಸಂಖ್ಯೆ:ಸಿಆಸುಇ 182 ಎಸ್ಆರ್ಆರ್ 2011, ದಿನಾಂಕ:06-05-2017
(2) ಸರ್ಕಾರದ ಅಧಿಸೂಚನೆ ಸಂ:ಇಡಿ 197 ಡಿಟಿಇ 2017, ದಿನಾಂಕ:11-01-2018
(3)ಸರ್ಕಾರದ ಆದೇಶ ಸಂಖ್ಯೆ:ಸಿಆಸುಇ 186 ಎಸ್ಆರ್ಎಸ್ 2018, ದಿನಾಂಕ:27-2-2019
(4) ಸರ್ಕಾರದ ಆದೇಶ ಸಂಖ್ಯೆ:ಸಿಆಸುಇ 186 ಎಸ್ಆರ್ಎಸ್ 2018, ದಿನಾಂಕ:15-5-2019

>>>><<<<

1. ಶ್ರೀ ಬಿ.ಕೆ. ಪವಿತ್ರ ಮತ್ತು ಇತರರು ವಿರುದ್ಧ ಯೂನಿಯನ್ ಆಫ್ ಇಂಡಿಯಾ ಪ್ರಕರಣದಲ್ಲಿ ಮಾನ್ಯ ಸರ್ವೋಚ್ಚ ನ್ಯಾಯಾಲಯವು ಸಿವಿಲ್ ಅಪೀಲ್ ಸಂಖ್ಯೆ:2368/2011 ಮತ್ತು ಇತರ ಸಿವಿಲ್ ಅಪೀಲುಗಳಲ್ಲಿ ದಿನಾಂಕ:09-02-2017 ರಂದು ನೀಡಿರುವ ತೀರ್ಪಿನಲ್ಲಿ ಕರ್ನಾಟಕ (ರಾಜ್ಯದ ಸಿವಿಲ್ ಸೇವೆಗಳಲ್ಲಿಯ ಹುದ್ದೆಗಳಿಗೆ) ಮೀಸಲಾತಿ ಆಧಾರದ ಮೇಲೆ ಬಡ್ತಿ ಹೊಂದಿದ ಸರ್ಕಾರಿ ನೌಕರರ ಜೇಷ್ಠತೆಯ ನಿರ್ಧಾರಣಾ ಅಧಿನಿಯಮ, 2002ರ ಪ್ರಕರಣ 3 ಮತ್ತು 4ನ್ನು ಸಂವಿಧಾನದ ಅನುಚ್ಛೇದ-14 ಮತ್ತು 16 ಕ್ಕೆ ಅಧಿಕಾರಾತೀತ (Ultra-vires Articles 14 and 16 of the constitution) ಎಂದು ಆದೇಶಿಸಿರುತ್ತದೆ.

2. ಈ ಹಿನ್ನೆಲೆಯಲ್ಲಿ, ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆ (ಸೇವಾ ನಿಯಮಗಳು) ವಿಭಾಗವು ಸರ್ಕಾರದ ಆದೇಶ ಸಂಖ್ಯೆ:ಸಿಆಸುಇ 182 ಎಸ್ಆರ್ಆರ್ 2011, ದಿನಾಂಕ:06-05-2017ರಲ್ಲಿ ನೀಡಿರುವ ಮಾರ್ಗಸೂಚಿಗಳನುಸಾರ ಮುಂಬಡ್ತಿಯಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ನೌಕರರಿಗೆ ಮೀಸಲಾತಿ ಅನುಸರಿಸಿರುವ ಎಲ್ಲಾ ವೃಂದಗಳ ಜೇಷ್ಠತಾ ಪಟ್ಟಿಗಳನ್ನು ಪರಿಷ್ಕರಿಸಲು ಆದೇಶಿಸಿರುತ್ತದೆ.

3. ಅಂತೆಯೇ, ಉಲ್ಲೇಖ (1) ರಲ್ಲಿನ ದಿನಾಂಕ:06-05-2017ರ ಸರ್ಕಾರದ ಆದೇಶದಲ್ಲಿ ನೀಡಿರುವ ಮಾರ್ಗಸೂಚಿಗಳನುಸಾರ ಮುಂಬಡ್ತಿಯಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ನೌಕರರಿಗೆ ಮೀಸಲಾತಿ ಅನುಸರಿಸಿರುವ ಈ ವೃಂದದ ಜೇಷ್ಠತಾ ಪಟ್ಟಿಯನ್ನು ಪರಿಷ್ಕರಿಸಿ, ಅಂತಿಮ ಜೇಷ್ಠತಾ ಪಟ್ಟಿಯನ್ನು ಮೇಲೆ ಉಲ್ಲೇಖ(2)ರ ಅಧಿಸೂಚನೆಯಲ್ಲಿ ದಿನಾಂಕ:11-01-2018ರಂದು ಹೊರಡಿಸಲಾಗಿದೆ.

4. ಮಾನ್ಯ ಸರ್ವೋಚ್ಚ ನ್ಯಾಯಾಲಯವು ಸಿವಿಲ್ ಅಪೀಲು ಸಂಖ್ಯೆ 2368/2011 ಶ್ರೀ ಬಿ.ಕೆ.ಪವಿತ್ರ ಮತ್ತು ಇತರರು ವಿರುದ್ಧ ಕೇಂದ್ರ ಸರ್ಕಾರ ಮತ್ತು ಇತರರು ಮತ್ತು ಸಂಬಂಧಿಸಿದ ರಿವ್ಯೂ ಅರ್ಜಿ ಹಾಗೂ ರಿಟ್ ಅರ್ಜಿಗಳಲ್ಲಿನ ಪ್ರಕರಣ ಎಂ.ಎ ಸಂಖ್ಯೆ: 1151/2018 ರಲ್ಲಿ ದಿನಾಂಕ: 10.05.2019 ರಂದು ನೀಡಿದ ತೀರ್ಪಿನಲ್ಲಿ ಕರ್ನಾಟಕ ರಾಜ್ಯ ಪತ್ರದಲ್ಲಿ ದಿನಾಂಕ: 23.06.2018 ರಂದು ಪ್ರಕಟಿಸಲಾದ ಕರ್ನಾಟಕ(ರಾಜ್ಯದ ಸಿವಿಲ್ ಸೇವೆಯಲ್ಲಿನ ಹುದ್ದೆಗಳಿಗೆ) ಮೀಸಲಾತಿ ಆದಾರದ ಮೇಲೆ ಬಡ್ತಿ ಹೊಂದಿರುವ ಸರ್ಕಾರಿ ನೌಕರರಿಗೆ ತತ್ಪರಿಣಾಮದ ಜೇಷ್ಠತೆಯನ್ನು ವಿಸ್ತರಿಸುವ ಅಧಿನಿಯಮ 2017ರ ಸಂವಿಧಾನಿಕ ಸಿಂಧುತ್ವವನ್ನು ಎತ್ತಿ ಹಿಡಿದಿರುವುದರಿಂದ 2017ರ ಅಧಿನಿಯಮದನ್ವಯ ಕ್ರಮ ತೆಗೆದುಕೊಳ್ಳುವ ಬಗ್ಗೆ ಉಲ್ಲೇಖ(3) ಮತ್ತು (4)ರ ಸರ್ಕಾರದ ಆದೇಶಗಳಲ್ಲಿ ಸೂಚನೆಗಳನ್ನು ನೀಡಲಾಗಿರುತ್ತದೆ.

5. 2017ರ ಅಧಿನಿಯಮದ ಸೆಕ್ಷನ್ 4ರಲ್ಲಿ "ಈ ಅಧಿನಿಯಮದಲ್ಲಿ ಅಥವಾ ತತ್ಕಾಲದಲ್ಲಿ ಜಾರಿಯಲ್ಲಿರುವ ಯಾವುದೇ ಇತರೇ ಕಾನೂನಿನಲ್ಲಿ ಏನೇ ಒಳಗೊಂಡಿದ್ದರೂ, ಮೀಸಲಾತಿ ಆದೇಶದಲ್ಲಿ ಉಪಬಂಧಿಸಲಾದಂತೆ ಬಡ್ತಿಯಲ್ಲಿ ಮೀಸಲಾತಿ ಆದೇಶದ ನೀತಿಗನುಸಾರವಾಗಿ 1978ರ ಏಪ್ರಿಲ್ 27ನೇ ದಿನಾಂಕದಿಂದ ಜಾರಿಗೆ ಬರುವಂತೆ ಬಡ್ತಿಹೊಂದಿದ ಅನುಸೂಚಿತ ಜಾತಿಗಳು ಮತ್ತು ಅನುಸೂಚಿತ ಬುಡಕಟ್ಟುಗಳಿಗೆ ಸೇರಿದ ಸರ್ಕಾರಿ ನೌಕರರಿಗೆ ಈಗಾಗಲೇ ನೀಡಲಾಗಿರುವ ತತ್ಪರಿಣಾಮ ಜೇಷ್ಠತೆಯು ಸಿಂಧುವಾಗಿರತಕ್ಕದ್ದು ಮತ್ತು ಅದನ್ನು ಸಂರಕ್ಷಿಸತಕ್ಕದ್ದು ಹಾಗೂ ಅದನ್ನು ಭಂಗಗೊಳಿಸತಕ್ಕದ್ದಲ್ಲ" ಎಂದು ತಿಳಿಸಿದೆ.

6. ಈ ಹಿನ್ನೆಲೆಯಲ್ಲಿ ಉಲ್ಲೇಖ(4)ರ ಆದೇಶದಲ್ಲಿ, ಉಲ್ಲೇಖ(3)ರ ಆದೇಶದ ಕಂಡಿಕೆ 8 ರ ಉಪಕಂಡಿಕೆ (2)ರಲ್ಲಿ ಉಲ್ಲೇಖಿಸಲಾದ, ಕರ್ನಾಟಕ ರಾಜ್ಯ ಸಿವಿಲ್ ಸೇವಾ (ಮುಂಬಡ್ತಿ ವೇತನ ಮತ್ತು ಪಿಂಚಣಿಗಳ ಕ್ರಮಬದ್ಧತೆ) ಅಧಿನಿಯಮ, 1973ರ ಸೆಕ್ಷನ್ 4,5 ಮತ್ತು 6 ಅನ್ನು ಸೆಕ್ಷನ್ 9 ರೊಡನೆ ಸಹವಾಚನ ಮಾಡಿಕೊಂಡು, ಇವುಗಳನ್ವಯ ತಾತ್ಕಾಲಿಕ/ಅಂತಿಮ ಜೇಷ್ಠತಾ ಪಟ್ಟಿಯನ್ನು ತಯಾರಿಸಿ ಪ್ರಕಟಿಸುವ, ಅರ್ಹತಾ ದಿನಾಂಕವನ್ನು ನಿಗಧಿಪಡಿಸುವ, ಮುಂಬಡ್ತಿಗಳನ್ನು ಪುನರಾವಲೋಕನೆ ಮಾಡುವ, ವೇತನ ಮತ್ತು ಪಿಂಚಣಿಗಳನ್ನು ನಿಗಧಿಪಡಿಸುವುದನ್ನು ಒಳಗೊಂಡ ಪ್ರಕ್ರಿಯೆಯನ್ನು ಗರಿಷ್ಠ 30 ದಿನಗಳೊಳಗಾಗಿ ಪೂರ್ಣಗೊಳಿಸತಕ್ಕದ್ದು ಎಂದು ತಿಳಿಸಿದೆ.

7. ಅದರಂತೆ, ಉಲ್ಲೇಖ(2)ರ ಅಧಿಸೂಚನೆಯಲ್ಲಿ ದಿನಾಂಕ: 11.01.2018ರಂದು ಹೊರಡಿಸಿರುವ ತಾಂತ್ರಿಕ ಶಿಕ್ಷಣ ಇಲಾಖೆಯ ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳಲ್ಲಿನ ಪ್ರಾಂಶುಪಾಲರು ವೃಂದದ ಪರಿಷ್ಕೃತ ಜೇಷ್ಠತಾ ಪಟ್ಟಿಯನ್ನು ಉಲ್ಲೇಖ(3) ಮತ್ತು (4)ರ ಸರ್ಕಾರದ ಆದೇಶಗಳ ಹಿನ್ನೆಲೆಯಲ್ಲಿ ಪುನರಾವಲೋಕಿಸಿ ಪರಿಷ್ಕರಿಸಲಾಗಿದೆ.

8. ಹಾಗಾಗಿ, ತಾಂತ್ರಿಕ ಶಿಕ್ಷಣ ಇಲಾಖೆಯ ಇಂಜಿನಿಯರಿಂಗ್ ಕಾಲೇಜುಗಳಲ್ಲಿನ ಪ್ರಾಂಶುಪಾಲರು ವೃಂದದ ಜೇಷ್ಠತಾ ಪಟ್ಟಿಯನ್ನು ಕರ್ನಾಟಕ ರಾಜ್ಯದ (ಸಿವಿಲ್ ಸೇವೆಗಳಲ್ಲಿನ ಹುದ್ದೆಗಳಿಗೆ) ಮೀಸಲಾತಿ ಆಧಾರದ ಮೇಲೆ ಬಡ್ತಿ ಹೊಂದಿರುವ ಸರ್ಕಾರಿ ನೌಕರರಿಗೆ ತತ್ಪರಿಣಾಮದ ಜೇಷ್ಠತೆಯನ್ನು ವಿಸ್ತರಿಸುವ ಅಧಿನಿಯಮ, 2017ರ ಪ್ರಕರಣ 3 ಮತ್ತು 4ನ್ನು ಅದರ ಪ್ರಕರಣ 5ರೊಂದಿಗೆ ಸಹವಾಚನ ಮಾಡಿಕೊಂಡಂತೆ ದಿನಾಂಕ:27.04.1978ರಿಂದ ಮೀಸಲಾತಿಯನ್ವಯ ನೀಡಲಾದ ಪದೋನ್ನತಿಗಳನ್ನು ನಿರ್ಧರಿಸಲಾಗಿದೆ. ಹಾಗಾಗಿ, ಸದರಿ ಜೇಷ್ಠತಾ ಪಟ್ಟಿಗಳಲ್ಲಿ ನೀಡಲಾಗಿದ್ದ ದಿನಾಂಕಗಳು ಸಿಂಧುವಾಗಿವೆ.

9. ಆದ್ದರಿಂದ ಉಲ್ಲೇಖ(3) ಮತ್ತು (4)ರ ಆದೇಶಗಳಲ್ಲಿನ ಸೂಚನೆಗಳನುಸಾರ ತಾಂತ್ರಿಕ ಶಿಕ್ಷಣ ಇಲಾಖೆಯಲ್ಲಿನ ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಪ್ರಾಂಶುಪಾಲರು ವೃಂದದ ಜೇಷ್ಠತಾ ಪಟ್ಟಿಯನ್ನು ಪುನರಾವಲೋಕಿಸಿ, ದಿನಾಂಕ:31-03-2019ರಲ್ಲಿದ್ದಂತೆ, ಪರಿಷ್ಕೃತ ತಾತ್ಕಾಲಿಕ ಜೇಷ್ಠತಾ ಪಟ್ಟಿಯನ್ನು ಅನುಬಂಧ-1ರಲ್ಲಿರುವಂತೆ ಈ ಮೂಲಕ ಎಲ್ಲಾ ಸಂಬಂಧಪಟ್ಟವರ ಮಾಹಿತಿಗಾಗಿ ಪ್ರಕಟಿಸಲಾಗಿದೆ.

10. ಸದರಿ ಪರಿಷ್ಕೃತ ತಾತ್ಕಾಲಿಕ ಜೇಷ್ಠತಾ ಪಟ್ಟಿಯ ಕುರಿತು ಆಕ್ಷೇಪಣೆ/ಸಲಹೆಗಳಿದ್ದಲ್ಲಿ , ಬಾಧಿತರಾದವರು ಅವರುಗಳ ಆಕ್ಷೇಪಣೆ/ಸಲಹೆಯನ್ನು ಈ ತಾತ್ಕಾಲಿಕ ಜೇಷ್ಠತಾ ಪಟ್ಟಿಯನ್ನು ಪ್ರಕಟಿಸಿದ ದಿನಾಂಕದಿಂದ 15 ದಿನಗಳ ಅವಧಿಯೊಳಗಾಗಿ ಅಗತ್ಯ ದಾಖಲಾತಿಗಳೊಂದಿಗೆ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ಉನ್ನತ ಶಿಕ್ಷಣ ಇಲಾಖೆ, 6ನೇ ಮಹಡಿ, 02ನೇ ಗೇಟ್, ಬಹುಮಹಡಿ ಕಟ್ಟಡ, ಬೆಂಗಳೂರು-01 ಇಲ್ಲಿಗೆ ಸಲ್ಲಿಸಬಹುದಾಗಿರುತ್ತದೆ. ನಿಗದಿತ ಅವಧಿಯ ನಂತರ ಸ್ವೀಕೃತವಾಗುವ ಆಕ್ಷೇಪಣೆಗಳನ್ನು ಪರಿಗಣಿಸಲಾಗುವುದಿಲ್ಲ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ,
ಮತ್ತು ಅವರ ಹೆಸರಿನಲ್ಲಿ

13/11/19

13/11/19
(ಎಂ.ಜಿ ವೆಂಕಟೇಶಯ್ಯ)
ಸರ್ಕಾರದ ಅಧೀನ ಕಾರ್ಯದರ್ಶಿ,
ಉನ್ನತ ಶಿಕ್ಷಣ ಇಲಾಖೆ (ತಾಂತ್ರಿಕ ಶಿಕ್ಷಣ).

ಪ್ರತಿ: ಸಂಕಲನಕಾರರು, ಕರ್ನಾಟಕ ರಾಜ್ಯಪತ್ರ, ವಿಕಾಸಸೌಧ ಘಟಕ, ಬೆಂಗಳೂರು:- ಮುಂದಿನ ರಾಜ್ಯ ಪತ್ರದಲ್ಲಿ ಪ್ರಕಟಿಸುವುದಕ್ಕಾಗಿ ಮತ್ತು 100 ಪ್ರತಿಗಳನ್ನು ಸರಬರಾಜು ಮಾಡಲು.

ಇವರಿಗೆ,

1) ಸರ್ಕಾರದ ಮುಖ್ಯ ಕಾರ್ಯದರ್ಶಿ, ಕರ್ನಾಟಕ ಸರ್ಕಾರ, ವಿಧಾನ ಸೌಧ, ಬೆಂಗಳೂರು.
2) ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆ, ವಿಧಾನ ಸೌಧ, ಬೆಂಗಳೂರು.
3) ನಿರ್ದೇಶಕರು, ತಾಂತ್ರಿಕ ಶಿಕ್ಷಣ ಇಲಾಖೆ, ಅರಮನೆ ರಸ್ತೆ, ಬೆಂಗಳೂರು.
4) ಸಂಬಂಧಪಟ್ಟ ಎಲ್ಲಾ ಅಧಿಕಾರಿಗಳಿಗೆ (ನಿರ್ದೇಶಕರು, ತಾಂತ್ರಿಕ ಶಿಕ್ಷಣ ಇವರ ಮೂಲಕ)
5) ತಾಂತ್ರಿಕ ಶಿಕ್ಷಣ ಇಲಾಖೆಯ ಅಧಿಕೃತ ವೆಬ್‌ಸೈಟ್‌ನಲ್ಲಿ ಪ್ರಚುರಪಡಿಸುವುದು (ನಿರ್ದೇಶಕರು, ತಾಂತ್ರಿಕ ಶಿಕ್ಷಣ ಇಲಾಖೆ)
6) ಶಾಖಾ ರಕ್ಷಾ ಕಡತ/ ಹೆಚ್ಚುವರಿ ಪ್ರತಿಗಳು/ಓಡಿಜಿಸಿ.

Website: www.karnataka.gov.in -> Status of Government Notification (Education Higher Department)

**ಸರ್ಕಾರದ ಅಧಿಸೂಚನ ಸಂಖ್ಯೆ: ಇಡಿ 108 ಡಿಟಿಇ 2019, ದಿನಾಂಕ: 13.11.2019ಕ್ಕೆ ಅನುಬಂಧ**

**ದಿನಾಂಕ: 31-03-2019 ರಲ್ಲಿದ್ದಂತೆ ತಾಂತ್ರಿಕ ಶಿಕ್ಷಣ ಇಲಾಖೆಯ ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳಲ್ಲಿನ ಮೂಲ ವೃಂದದ**

**ಪ್ರಾಂಶುಪಾಲರು ಹುದ್ದೆಯ ತಾತ್ಕಾಲಿಕ ಜ್ಯೇಷ್ಠತಾ ಪಟ್ಟಿ**

| ಕ್ರಮ ಸಂಖ್ಯೆ | ಪ್ರಾಂಶುಪಾಲರ ಹೆಸರು ಶ್ರೀಯುತರು | ಮೀಸಲಾತಿ | ವಿದ್ಯಾರ್ಹತೆ | ಜನ್ಮ ದಿನಾಂಕ | ನೇಮಕಾತಿ ವಿಧಾನ | ಪ್ರಾಂಶುಪಾಲರಾಗಿ ಮುಂಬಡ್ತಿ/ನೇಮಕಾತಿಗೊಂಡ ದಿನಾಂಕ | ಸೇವೆಗೆ ಸೇರಿದ ದಿನಾಂಕ | ಷರಾ |
|---|---|---|---|---|---|---|---|---|
| 1 | 2 | 3 | 4 | 5 | 6 | 7 | 8 | 9 |
| 1 | ಡಾ. ಶಶಿಧರ್. ಎಸ್. ರಾಮ್‌ತಾಳ್ | ಪ.ಪಂ | ಪಿಹೆಚ್‌ಡಿ | 20-07-1961 | ಮುಂಬಡ್ತಿ | 05-01-2009 | 18-01-1988 | |
| 2 | ಡಾ. ಕರಿಸಿದ್ದಪ್ಪ | ಸಾ.ಅ | ಬಿ.ಇ, ಎಂ.ಟೆಕ್, ಪಿಹೆಚ್‌ಡಿ | 20-05-1957 | ನೇರ | 16-11-2010 | 16-11-2010 | ನಿವೃತ್ತಿ |
| 3 | ಡಾ. ಪ್ರಕಾಶ್. ಕೆ.ಬಿ | ಸಾ.ಅ | ಬಿ.ಇ, ಎಂ.ಇ, ಪಿಹೆಚ್‌ಡಿ | 25-04-1962 | ನೇರ | 22-11-2010 | 22-11-2010 | |
| 4 | ಡಾ. ಪುಂಡರೀಕ. ಜಿ | ಪ.ಜಾ | ಎಂ.ಟೆಕ್, ಪಿಹೆಚ್‌ಡಿ | 11-09-1966 | ನೇರ | 29-11-2010 | 29-11-2010 | |
| 5 | ಡಾ. ಚಂದ್ರಶೇಖರ್. ಕೆ.ಜಿ | ಸಾ.ಅ | ಬಿ.ಇ, ಎಂ.ಇ, ಪಿಹೆಚ್‌ಡಿ | 04-09-1966 | ನೇರ | 18-11-2010 | 18-11-2010 | |
| 6 | ಡಾ. ಕೃಷ್ಣ. ಕೆ.ಸಿ | ಪ್ರ-1 | ಎಂ.ಇ, ಪಿಹೆಚ್‌ಡಿ | 27-08-1959 | ನೇರ | 16-11-2010 | 16-11-2010 | ನಿಧನ |
| 7 | ಡಾ. ವೆಂಕಟೇಶ್ ರಾಯ್ಕರ್ | ಸಾ.ಅ | ಬಿ.ಇ, ಪಿಹೆಚ್‌ಡಿ | 01-06-1963 | ನೇರ | 29-11-2010 | 29-11-2010 | ದಿ: 04.03.2015 ರಂದು ಹುದ್ದೆಗೆ ರಾಜಿನಾಮೆ ನೀಡಿರುತ್ತಾರೆ. |

13/11/19

| | | | | | | | | |
|---|---|---|---|---|---|---|---|---|
| 8 | ಡಾ.ವೆಂಕಟೇಶ್ | ಪ.ಜಾ | ಬಿ.ಇ. ಎಂ.ಇ. ಪಿ.ಹೆಚ್.ಡಿ | 24-11-1965 | ನೇರ | 29-05-2014 | 20-11-2014 | |

13/11/19

13/11/19
(ಎಂ.ಜಿ ವೆಂಕಟೇಶಯ್ಯ)
ಸರ್ಕಾರದ ಅಧೀನ ಕಾರ್ಯದರ್ಶಿ,
ಉನ್ನತ ಶಿಕ್ಷಣ ಇಲಾಖೆ (ತಾಂತ್ರಿಕ ಶಿಕ್ಷಣ).